ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ನೀಡುವ ಅನುದಾನದ ಬಗ್ಗೆ

1168(2334); ಮಾನ್ಯ ಭೂಸನೂರ ರಮೇಶ್ ಬಾಳಪ್ಪ (ಸಿಂಧಗಿ)

ಅ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ವಿಜಪುರ ಜಿಲ್ಲೆಯ ಸಿಂಧಗಿ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ದೇವಸ್ಥಾನಗಳಿಗೆ ಸರ್ಕಾರದಿಂದ ಜೀರ್ಣೋದ್ಧಾರಕ್ಕೆ ಅನುದಾನ ಒದಗಿಸಲಾಗಿದೆ; (ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ದೇವಸ್ಥಾನಗಳ ಹೆಸರು ಮತ್ತು ವಿಳಾಸ ಗ್ರಾಮವಾರು ಮಾಹಿತಿ ಒದಗಿಸುವುದು)

ಆ) ಪ್ರಸಕ್ತ ಸಾಲಿನಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಯಾವ ಯಾವ ಯೋಜನೆಗಳಡಿ ಎಷ್ಟು ಅನುದಾನ ಮತ ಕ್ಷೇತ್ರವಾರು ನಿಗದಿಪಡಿಸಲಾಗಿದೆ?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನಾ ಮತ್ತು ಮುಜರಾಯಿ ಸಚಿವರು)

ಅ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ವಿಜಯಪುರ ಜಿಲ್ಲೆಯ ಸಿಂಧಗಿ ಮತಕ್ಷೇತ್ರದ ದೇವಸ್ಥಾನಗಳ ಜೀರ್ಣೋದ್ಧರಕ್ಕಾಗಿ ಈ ಕೆಳಕಂಡ ಯೋಜನೆಗಳಡಿ ಒಟ್ಟು **ರೂ.260-83ಲಕ್ಷಗಳ** ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಯೋಜನೆ	2012-13	2013-14	2014-15	2015-16
				(ಮೊತ್ತ ರೂ.ಗಳಲ್ಲಿ)
ದುರಸ್ತಿ/ ಜೀರ್ಣೋದ್ಧಾರ/ನಿರ್ಮಾಣ	15450000	3000000	3700000	-
ಆರಾಧನಾ	373748	1500000	1160000	386850
ಪರಿಶಿಷ್ಟಜಾತಿ ಉಪಯೋಜನೆ	475000			
ಗಿರಿಜನ ಉಪಯೋಜನೆ	37500			
ಒಟ್ಟು	**16336248**	**4500000**	**4860000**	**386850**

ದುರಸ್ಥಿ, ಜೀರ್ಣೋದ್ಧಾರ, ಅಭಿವೃದ್ಧಿ ಯೋಜನೆಯಡಿ ಬಿಡುಗಡೆ ಮಾಡಿದ ದೇವಸ್ಥಾನಗಳ ವಿವರ ಹೆಚ್ಚಿನ ಪ್ರಮಾಣದಲ್ಲಿದ್ದು, ಸಂಬಂಧಪಟ್ಟ ಶಾಸಕರಿಗೆ ಪ್ರತ್ಯೇಕವಾಗಿ ಒದಗಿಸಲಾಗುವುದು.

ಆರಾಧನಾ ಯೋಜನೆ/ಪರಿಶಿಷ್ಟಜಾತಿ ಉಪಯೋಜನೆ/ ಗಿರಿಜನ ಉಪಯೋಜನೆ ಅಡಿ ಬಿಡುಗಡೆ ಮಾಡಿದ ಅನುದಾನವನ್ನು ಆಯಾ ಯೋಜನೆಯ ಮಾರ್ಗಸೂಚಿಯಂತೆ ಬಳಸಿಕೊಳ್ಳಲು ಜಿಲ್ಲಾಧಿಕಾರಿಗಳು ಕ್ರಮವಹಿಸಿರುತ್ತಾರೆ.

ಆ) 2015–16ನೇ ಸಾಲಿನಲ್ಲಿ ಸಾಮಾನ್ಯ ಯೋಜನೆಯಡಿ ಅನುದಾನ ಕೋರಿ ಸ್ವೀಕೃತವಾಗುವ ಮನವಿಗಳನ್ನು ಆಯವ್ಯಯದಲ್ಲಿ ಒದಗಿಸಿದ ಅನುದಾನದ ಲಭ್ಯತೆಗನುಗುಣವಾಗಿ ಪರಿಶೀಲಿಸಿ ಬಿಡುಗಡೆ ಮಾಡಲಾಗುತ್ತಿದೆ.

ಆರಾಧನಾ ಪರಿಶಿಷ್ಟಜಾತಿ ಉಪಯೋಜನೆ ಹಾಗೂ ಗಿರಿಜನ ಉಪಯೋಜನೆಗಳ ಅಡಿಯಲ್ಲಿ ಸಿಂಧಗಿ ವಿಧಾನಸಭಾ ಕ್ಷೇತ್ರಕ್ಕೆ ರೂ.11–60 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಖೈದಿಗಳ ಬಿಡುಗಡೆ

1169(2335); ಶ್ರೀ ಭೂಸನೂರ ರಮೇಶ್ ಬಾಳಪ್ಪ (ಸಿಂಧಗಿ)

ಅ) ಕರ್ನಾಟಕ ಕಾರಾಗೃಹಗಳ ಕಾಯ್ದೆ ಕೆ.ಪಿ.ಆರ್. 1974 ನಿಯಮ 67, 68 ಮತ್ತು 69 ರಡಿಯಲ್ಲಿ ವೈದ್ಯಕೀಯ ಆಧಾರದ ಮೇಲೆ ಬಿಡುಗಡೆಯಾಗಬೇಕಾದ ಕೈದಿಗಳ ಸಂಖ್ಯೆ ಎಷ್ಟು? (ಕಾರಾಗೃಹಗಳವಾರು ಹಾಗೂ ಕೈದಿಗಳ ಸಂಖ್ಯೆ, ಹೆಸರಿನೊಂದಿಗೆ ಮಾಹಿತಿ ಒದಗಿಸುವುದು);

ಆ) ಸದರಿ ಕೈದಿಗಳ ಬಿಡುಗಡೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ವಯೋವೃದ್ಧ ಖೈದಿಗಳಿಗೆ ಕಾರಾಗೃಹದಲ್ಲಿ ವಿಶೇಷ ಸೌಲಭ್ಯ ನೀಡಲಾಗುತ್ತಿದೆಯೇ?